# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 581 (681) |
| ಮಾನ್ಯ ಸದಸ್ಯರ ಹೆಸರು | ಶ್ರೀ ಕೆ. ಅಬ್ದುಲ್ ಜಬ್ಬರ್ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 21/08/2026 |
| ಉತ್ತರಿಸುವವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿನ ಲಕ್ಷಾಂತರ ಅಸಂಘಟಿತ ಕಾರ್ಮಿಕರು ಇನ್ನೂ ಸರ್ಕಾರದ ವಿವಿಧ ಕಲ್ಯಾಣ ಯೋಜನೆಗಳ ವ್ಯಾಪ್ತಿಗೆ ಬರದೇ ಇರುವುದರಿಂದ ಸಾಮಾಜಿಕ ಭದ್ರತೆ, ಆರೋಗ್ಯ ವಿಮೆ, ಪಿಂಚಣಿ ಹಾಗೂ ಇತರ ಸೌಲಭ್ಯಗಳಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು<br>ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯು ಜಾರಿಗೊಳಿಸುತ್ತಿರುವ ವಿವಿಧ ಯೋಜನೆಗಳಾದ ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ, ಕರ್ನಾಟಕ ರಾಜ್ಯ ದಿನಪತ್ರಿಕೆ ಹಾಗೂ ಹಾಲು ವಿತರಣಾ ಕಾರ್ಮಿಕರ ಅಪಘಾತ ಪರಿಹಾರ ಮತ್ತು ವೈದ್ಯಕೀಯ ಸೌಲಭ್ಯ ಯೋಜನೆ, ಕರ್ನಾಟಕ ರಾಜ್ಯ ಮೋಟಾರು ಸಾರಿಗೆ ಹಾಗೂ ಇತರೆ ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದ್ಧಿ ಯೋಜನೆಗಳಡಿ ಕಾರ್ಮಿಕರು ಸ್ವಯಂ ಆಗಿ ನೋಂದಣಿಯಾಗಲು ಮಂಡಳಿಯ ವೆಬ್ ಸೈಟ್ ಹಾಗೂ ಕರ್ನಾಟಕ ರಾಜ್ಯ ಗಿಗ್ ಕಾರ್ಮಿಕರ ವಿಮಾ ಯೋಜನೆಯಡಿ ನೋಂದಣಿಯಾಗಲು ಸೇವಾ ಸಿಂಧು ಪೋರ್ಟಲ್‌ನಲ್ಲಿ ಅವಕಾಶ ಕಲ್ಪಿಸಲಾಗಿದ್ದು, ಯೋಜನೆಯ ಮಾನದಂಡಗಳನ್ನು ಪೂರೈಸುವ ಅರ್ಹ ಕಾರ್ಮಿಕರು ಸ್ವಯಂ ನೋಂದಣಿ ಮಾಡಿಕೊಳ್ಳುವ ಮೂಲಕ ಯೋಜನೆಯ ಸೌಲಭ್ಯಗಳನ್ನು ಪಡೆದುಕೊಳ್ಳಬಹುದಾಗಿರುತ್ತದೆ.<br>ಯಾವುದೇ ಕಾರ್ಮಿಕರು ಯೋಜನೆಗಳ ವ್ಯಾಪ್ತಿಯಿಂದ ಹೊರಗುಳಿಯದಂತೆ ಸ್ವಯಂ ನೋಂದಣಿಯ ಕುರಿತು ಕಾರ್ಮಿಕರಲ್ಲಿ ಅರಿವು ಮೂಡಿಸಿ ಹೆಚ್ಚಿನ ನೋಂದಣಿ ಮಾಡಿಸಲು ಕ್ರಮಕೈಗೊಳ್ಳಲಾಗುತ್ತಿದೆ. |
| ಆ) | ಹಾಗಿದ್ದಲ್ಲಿ, ಈವರೆಗೆ ಎಷ್ಟು ಅಸಂಘಟಿತ ಕಾರ್ಮಿಕರು ನೋಂದಣಿಯಿಂದ ವಂಚಿತ ರಾಗಿದ್ದಾರೆ; ಅವರುಗಳನ್ನು ಸರ್ಕಾರದ ಕಲ್ಯಾಣ ಯೋಜನೆಗಳ ವ್ಯಾಪ್ತಿಗೆ ತರಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ಸಂಪೂರ್ಣ ಮಾಹಿತಿ ಒದಗಿಸುವುದು) | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಿವಿಧ ಮಂಡಳಿಗಳಲ್ಲಿ ಈವರೆಗೆ ಅಸಂಘಟಿತ ಕಾರ್ಮಿಕರಿಗೆ ಜಾರಿಗೊಳಿಸಿರುವ ಕಲ್ಯಾಣ ಯೋಜನೆಗಳ ವಿವರ ಈ ಕೆಳಕಂಡಂತಿದೆ.<br>**<u>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:</u>**<br>ಈ ಮಂಡಳಿಯಿಂದ ಈವರೆಗೆ ಅಸಂಘಟಿತ ಕಾರ್ಮಿಕರು ನೋಂದಣಿಯಿಂದ ವಂಚಿತರಾಗಿದ್ದಾರೆ ಎಂಬ ಬಗ್ಗೆ ನಿರ್ದಿಷ್ಟವಾದ ಮಾಹಿತಿ ಲಭ್ಯವಿರುವುದಿಲ್ಲ. |

| | | |
|---|---|---|
| | | ಆದರೆ, ನೋಂದಣಿಯಿಂದ ವಂಚಿತರಾದ ಅಸಂಘಟಿತ ವಲಯಕ್ಕೆ ಸೇರಿದ ಅರ್ಹ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರನ್ನು ವಿಶೇಷ ನೋಂದಣಿ ಅಭಿಯಾನದ ಮೂಲಕ ಸ್ಥಳಗಳಲ್ಲಿಯೇ ನೋಂದಾಯಿಸಲು ಕ್ರಮವಹಿಸಲಾಗುತ್ತಿದೆ. ಅಲ್ಲದೆ ಕಾರ್ಮಿಕರಿಗೆ ಮಂಡಳಿಯ ನೋಂದಣಿ ಮತ್ತು ಸೌಲಭ್ಯಗಳ ಬಗ್ಗೆ ಹೆಚ್ಚಿನ ಅರಿವು ಮೂಡಿಸಲು ಐಇಸಿ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಜನಜಾಗೃತಿ ಮೂಡಿಸಲಾಗುತ್ತಿದೆ.<br>**<u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:</u>**<br>ಈ ಮಂಡಳಿಯು ಅಸಂಘಟಿತ ಕಾರ್ಮಿಕರ ಸಂಖ್ಯೆಗೆ ಸಂಬಂಧಿಸಿದಂತೆ, ಈವರೆಗೆ ಕಾರ್ಮಿಕ ಇಲಾಖೆಯಿಂದ ಯಾವುದೇ ಸಮೀಕ್ಷೆ ನಡೆಸಿರುವುದಿಲ್ಲ. ಆದ್ದರಿಂದ, ನೋಂದಣಿಯಿಂದ ವಂಚಿತರಾದ ಕಾರ್ಮಿಕರ ಮಾಹಿತಿ ಲಭ್ಯವಿರುವುದಿಲ್ಲ. ಯೋಜನೆಯ ಮಾನದಂಡಗಳನ್ನು ಪೂರೈಸುವ ಅರ್ಹ ಕಾರ್ಮಿಕರು ಸ್ವಯಂ ನೋಂದಣಿ ಮಾಡಿಕೊಳ್ಳುವ ಮೂಲಕ ಯೋಜನೆಯ ಸೌಲಭ್ಯಗಳನ್ನು ಪಡೆದುಕೊಳ್ಳಬಹುದಾಗಿರುತ್ತದೆ.<br>ರಾಜ್ಯದಲ್ಲಿನ ಯಾವುದೇ ಅಸಂಘಟಿತ ಕಾರ್ಮಿಕರು ಯೋಜನೆಗಳ ಸೌಲಭ್ಯದಿಂದ ವಂಚಿತರಾಗದಂತೆ ನೋಂದಣಿ ಕ್ಯಾಂಪ್‌ಗಳನ್ನು ಆಯೋಜಿಸುವುದರೊಂದಿಗೆ ಕರಪತ್ರ, ದಿನಪತ್ರಿಕೆಗಳು ಹಾಗೂ ರೇಡಿಯೋ ಜಿಂಗಲ್ಸ್‌ಗಳ ಮೂಲಕ ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಅಲ್ಲದೇ, ಉಚಿತ ಕಾರ್ಮಿಕ ಸಹಾಯವಾಣಿ 155214 ಮೂಲಕ ಯೋಜನೆಗಳ ಬಗ್ಗೆ ಮಾಹಿತಿಯನ್ನು ನೀಡಲಾಗುತ್ತಿದೆ. |
| ಇ) | ಕಳೆದ ಮೂರು ವರ್ಷಗಳಲ್ಲಿ ಅಸಂಘಟಿತ ಕಾರ್ಮಿಕರ ನೋಂದಣಿಗಾಗಿ ಸರ್ಕಾರ ನಡೆಸಿದ ವಿಶೇಷ ಅಭಿಯಾನಗಳು ಯಾವುವು; | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ಮಂಡಳಿಗಳು ಕಳೆದ ಮೂರು ವರ್ಷಗಳಲ್ಲಿ ಅಸಂಘಟಿತ ಕಾರ್ಮಿಕರ ನೋಂದಣಿಗಾಗಿ ನಡೆಸಿದ ವಿಶೇಷ ಅಭಿಯಾನಗಳ ವಿವರ ಈ ಕೆಳಕಂಡಂತಿದೆ.<br>**<u>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:</u>**<br>ಈ ಮಂಡಳಿಯಲ್ಲಿ ನೋಂದಣಿಯಿಂದ ವಂಚಿತರಾದ ಕಾರ್ಮಿಕರನ್ನು ನೋಂದಾಯಿಸಲು ಈ ಕೆಳಕಂಡ ಕ್ರಮಗಳನ್ನು ವಹಿಸಲಾಗಿದೆ.<br>1. ಪ್ರತಿ ಜಿಲ್ಲೆಯಲ್ಲಿ ಕಾರ್ಮಿಕ ಸೇವಾ ಕೇಂದ್ರಗಳನ್ನು ಸ್ಥಾಪಿಸಿದ್ದು, ಅದರ ಮೂಲಕ ಅರ್ಹ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರನ್ನು ನೋಂದಾಯಿಸಲಾಗುತ್ತಿದೆ.<br>2. ಮಂಡಳಿಯ ನೋಂದಣಿ ಮತ್ತು ಸೌಲಭ್ಯಗಳ ಬಗ್ಗೆ ಹೆಚ್ಚಿನ ಅರಿವು ಮೂಡಿಸಲು ಐಇಸಿ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಜನಜಾಗೃತಿ ಮೂಡಿಸ ಲಾಗುತ್ತಿದೆ.<br>3. ಅರ್ಹ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರನ್ನು ವಿಶೇಷ ನೋಂದಣಿ ಅಭಿಯಾನದ ಮೂಲಕ ಸ್ಥಳಗಳಲ್ಲಿಯೇ ನೋಂದಾಯಿಸಲು ಕ್ರಮವಹಿಸಲಾಗುತ್ತಿದೆ. |

| | | |
|---|---|---|
| | | **<u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:</u>**<br>ಈ ಮಂಡಳಿಯು ಕಳೆದ ಮೂರು ವರ್ಷಗಳಲ್ಲಿ ಅಸಂಘಟಿತ ಕಾರ್ಮಿಕರ ನೋಂದಣಿಗಾಗಿ ಈ ಕೆಳಕಂಡ ಅಭಿಯಾನಗಳನ್ನು ಕೈಗೊಳ್ಳಲಾಗಿದೆ:<br>• ಯೋಜನೆಗಳಡಿ ಗ್ರಾಮ/ ವಾರ್ಡ್/ ತಾಲ್ಲೂಕು/ ಜಿಲ್ಲಾ ಮಟ್ಟದ ನೋಂದಣಿ ಕ್ಯಾಂಪ್‌ಗಳನ್ನು ಏರ್ಪಡಿಸಲಾಗಿರುತ್ತದೆ.<br>• ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯು ಜಾರಿಗೊಳಿಸುತ್ತಿರುವ ಯೋಜನೆಗಳ ಕುರಿತಂತೆ ಸಾಮಾಜಿಕ ಮಾಧ್ಯಮಗಳಾದ Twitter(X)ಖಾತೆ Facebook ಖಾತೆ, YouTube ಖಾತೆ ಮತ್ತು Instagram ಖಾತೆ ಮುಂತಾದ ಸಾಮಾಜಿಕ ಮಾಧ್ಯಮಗಳ ಮೂಲಕ ಸಾರ್ವಜನಿಕರಲ್ಲಿ ಅರಿವು ಮೂಡಿಸಲಾಗುತ್ತಿದೆ.<br>• ಯೋಜನೆಗಳ ಬಗ್ಗೆ ಅರಿವು ಮೂಡಿಸಲು ಜಿಲ್ಲಾ ಮಟ್ಟದಲ್ಲಿ ಮಾನ್ಯ ಕಾರ್ಮಿಕ ಸಚಿವರ ಅಧ್ಯಕ್ಷತೆಯಲ್ಲಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದ್ದು, ಈವರೆಗೆ 27 ಜಿಲ್ಲೆಗಳಲ್ಲಿ ಕಾರ್ಯಕ್ರಮ ಆಯೋಜಿಸಲಾಗಿದೆ.<br>ಮಂಡಳಿಯು ಜಾರಿಗೊಳಿಸುತ್ತಿರುವ ಯೋಜನೆಗಳ ಕುರಿತು ರೇಡಿಯೋಗಳಲ್ಲಿ ಜಿಂಗಲ್ಸ್‌ಗಳ ಮೂಲಕ ಪ್ರಚಾರ ಮಾಡಲಾಗಿರುತ್ತದೆ. |
| ಈ) | ನೋಂದಣಿಯಿಂದ ವಂಚಿತರಾದ ಕಾರ್ಮಿಕರನ್ನು ಗುರುತಿಸಿ ನಿಗದಿತ ಅವಧಿಯೊಳಗೆ ನೋಂದಾಯಿಸಲು ಸರ್ಕಾರ ಯಾವುದೇ ವಿಶೇಷ ಕಾರ್ಯಯೋಜನೆ ರೂಪಿಸಿರುವುದೇ; | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ಮಂಡಳಿಗಳು ನೋಂದಣಿಯಿಂದ ವಂಚಿತರಾದ ಕಾರ್ಮಿಕರನ್ನು ಗುರುತಿಸಿ ನಿಗದಿತ ಅವಧಿಯೊಳಗೆ ನೋಂದಾಯಿಸುವ ಸಲುವಾಗಿ ಅಗತ್ಯವಿರುವ ಎಲ್ಲಾ ಅರಿವು ಕಾರ್ಯಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. |
| ಉ) | ಗ್ರಾಮ ಪಂಚಾಯಿತಿ ಹಾಗೂ ನಗರ ಸ್ಥಳೀಯ ಸಂಸ್ಥೆಗಳ ಮಟ್ಟದಲ್ಲಿ ನೋಂದಣಿ ಶಿಬಿರಗಳನ್ನು ಆಯೋಜಿಸುವ ಕುರಿತು ಸರ್ಕಾರದ ನಿರ್ಧಾರವೇನು? | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ಮಂಡಳಿಗಳು ಗ್ರಾಮ ಪಂಚಾಯಿತಿ ಹಾಗೂ ನಗರ ಸ್ಥಳೀಯ ಸಂಸ್ಥೆಗಳ ಮಟ್ಟದಲ್ಲಿ ನೋಂದಣಿ ಶಿಬಿರಗಳನ್ನು ಆಯೋಜಿಸಲು ಕೈಗೊಂಡ ಕ್ರಮಗಳ ವಿವರ ಈ ಕೆಳಕಂಡಂತಿದೆ.<br>**<u>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:</u>**<br>ಈ ಮಂಡಳಿಯಲ್ಲಿ ಕಾರ್ಮಿಕರನ್ನು ತಂತ್ರಾಂಶದ ಮೂಲಕ ನೋಂದಣಿ ಮಾಡಲಾಗುತ್ತಿದ್ದು, ರಾಜ್ಯಾದ್ಯಂತ ಗ್ರಾಮ ಪಂಚಾಯಿತಿ ಹಾಗೂ ನಗರ ಸ್ಥಳೀಯ ಸಂಸ್ಥೆಗಳೂ ಸೇರಿದಂತೆ ಕಟ್ಟಡ ಕಾರ್ಮಿಕರು ಕೆಲಸ ಮಾಡುವ ಸ್ಥಳಗಳು ಅಥವಾ ವಾಸಿಸುವ ಸ್ಥಳಗಳಿಗೆ ಭೇಟಿ ನೀಡಿ ಸ್ಥಳದಲ್ಲಿಯೇ ನೋಂದಣಿ ಮಾಡಲಾಗುತ್ತಿದೆ.<br>**<u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:</u>**<br>ಈ ಮಂಡಳಿಯು ಗ್ರಾಮ ಪಂಚಾಯಿತಿ ಹಾಗೂ ನಗರ ಸ್ಥಳೀಯ ಸಂಸ್ಥೆಗಳ ಮಟ್ಟದಲ್ಲಿಯೂ ಸಹ ಯೋಜನೆಗಳ ಕುರಿತಂತೆ ಈ ಕೆಳಕಂಡ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ: |

| | | |
|---|---|---|
| | | • ಕರ್ನಾಟಕ ಕಾನೂನು ಸೇವಾ ಪ್ರಾಧಿಕಾರದ ಸಹಯೋಗ ದೊಂದಿಗೆ ಸಹ ಸಾರ್ವಜನಿಕರಲ್ಲಿ ಅರಿವು ಮೂಡಿಸಲಾಗುತ್ತಿದೆ.<br>• ಯೋಜನೆಗಳಡಿ ಗ್ರಾಮ/ವಾರ್ಡ್/ತಾಲ್ಲೂಕು/ಜಿಲ್ಲಾ ಮಟ್ಟದ ವಿಶೇಷ ನೋಂದಣಿ ಕ್ಯಾಂಪ್‌ಗಳನ್ನು ಏರ್ಪಡಿಸ ಲಾಗಿರುತ್ತದೆ.<br>• ಯೋಜನೆಗಳ ಬಗ್ಗೆ ಅರಿವು ಮೂಡಿಸಲು ಜಿಲ್ಲಾ ಮಟ್ಟದಲ್ಲಿ ಮಾನ್ಯ ಕಾರ್ಮಿಕ ಸಚಿವರ ಅಧ್ಯಕ್ಷತೆಯಲ್ಲಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದ್ದು, ಈವರೆಗೆ 27 ಜಿಲ್ಲೆಗಳಲ್ಲಿ ಕಾರ್ಯಕ್ರಮ ಆಯೋಜಿಸಲಾಗಿದೆ. |

**ಕಾಇ 465 ಎಲ್‌ಇಟಿ 2026**

**(ಸಂತೋಷ್ ಎಸ್ ಲಾಡ್)**
**ಕಾರ್ಮಿಕ ಸಚಿವರು**